# ಕನ್ನಡ ಸಾಹಿತ್ಯ ಪರಿಷತ್ತು

ಸ್ಥಾಪನೆ : ೧೯೧೫

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦೦೧೮

ದೂರವಾಣಿ : ೦೮೦-೨೬೬೧೨೯೯೧, ೨೬೬೨೩೫೮೪, ೨೨೪೨೩೮೬೭, ೨೬೬೭೨೯೯೨

ಮಿಂಚಂಚೆ : kannadaparishattu@gmail.com ಜಾಲತಾಣ : http://www.kasapa.in

ಯೂಟ್ಯೂಬ್ : http://www.youtube.com/c/KannadaParishattu

ಫೇಸ್‌ಬುಕ್ : https://www.facebook.com/KannadaSahityaParishattu ಟ್ವಿಟರ್ : @kannadaparishat App URL : https://bit.ly/Kasapa-app


ಕ್ರಮಸಂಖ್ಯೆ: ಕಸಾಪ/ಆಪ್ತಶಾಖೆ/ದಾಖಲೆ/೨೦೨೩-೨೪ ದಿನಾಂಕ: ೦೬-೦೪-೨೦೨೩

ಇವರಿಗೆ

ಸಂಪಾದಕರು / ಮುಖ್ಯ ವರದಿಗಾರರು

..................................................

ಬೆಂಗಳೂರು

ಮಾನ್ಯರೆ,

**ಪತ್ರಿಕಾ/ಟಿ.ವಿ. ಹೇಳಿಕೆ – ಪ್ರಕಟಣೆ ಕೃಪೆಗಾಗಿ**

## "ಕನ್ನಡ ಸಾಹಿತ್ಯ ಪರಿಷತ್ತಿನ ಲೆಕ್ಕಪತ್ರ ವಿಭಾಗದಲ್ಲಿ ಕಾರ್ಯನಿರ್ವಹಿಸುವ ಮೂಲಕ ಕನ್ನಡ ಸೇವೆಗೆ ಅವಕಾಶ"

೧. ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಮತ್ತು ಜಾನಪದ ಇವುಗಳ ರಕ್ಷಣೆ, ಪ್ರಸಾರ ಮತ್ತು ಅಭಿವೃದ್ಧಿಯ ಮೂಲ ಧ್ಯೇಯೋದ್ದೇಶಗಳೊಂದಿಗೆ ಕನ್ನಡ-ಕನ್ನಡಿಗ-ಕರ್ನಾಟಕದ ಹಿತರಕ್ಷಣೆ ಕಾಪಾಡುವ ಹಿನ್ನೆಲೆಯಲ್ಲಿ ಹಾಗೂ ಕನ್ನಡ ಸಾಹಿತ್ಯ ಪರಿಷತ್ತನ್ನು **"ಜನಸಾಮಾನ್ಯರ ಪರಿಷತ್ತನ್ನಾಗಿ"** ರೂಪಿಸುವ ಉದ್ದೇಶವನ್ನು ಮಾನ್ಯ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಹೊಂದಿದ್ದಾರೆ.

೨. ಈ ನಿಟ್ಟಿನಲ್ಲಿ ಪರಿಷತ್ತಿನ ಕಾರ್ಯಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ವಿವಿಧ ಕೆಲಸಗಳನ್ನು ನಿರ್ವಹಿಸಲು ಕನ್ನಡಿಗರಿಗೆ ಅವಕಾಶ ನೀಡಲು ಪರಿಷತ್ತು ಮುಂದಾಗಿದ್ದು, **ಕನ್ನಡ ಸಾಹಿತ್ಯ ಪರಿಷತ್ತಿನ ಲೆಕ್ಕಪತ್ರ ವಿಭಾಗದಲ್ಲಿ ಕಾರ್ಯನಿರ್ವಹಿಸಲು ಆಸಕ್ತಿಯುಳ್ಳವರು ಬಂದು ಕಾರ್ಯನಿರ್ವಹಿಸಬಹುದಾಗಿದೆ. ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿ, ಬ್ಯಾಂಕಿಂಗ್ ಹಾಗೂ ಸಾರ್ವಜನಿಕ ಉದ್ಯಮ ಕ್ಷೇತ್ರಗಳಲ್ಲಿ, ಕನ್ನಡಪರ ಸಂಘ-ಸಂಸ್ಥೆಗಳಲ್ಲಿ ಸೇರಿದಂತೆ ಇನ್ನಿತರೆ ಕ್ಷೇತ್ರಗಳಲ್ಲಿ "ಲೆಕ್ಕಪತ್ರ ನಿರ್ವಹಣೆ" ಕಾರ್ಯನಿರ್ವಹಿಸಿ ನಿವೃತ್ತರಾದವರಿಗೆ, ಸ್ವಯಂ ನಿವೃತ್ತಿ ಹೊಂದಿದವರಿಗೆ ಹಾಗೂ ಕನ್ನಡ ಸೇವಾಸಕ್ತ ಯುವಕ-ಯುವತಿಯರಿಗೆ** ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಕೆಲಸ ನಿರ್ವಹಿಸಲು ಅವಕಾಶ ಕಲ್ಪಿಸಲಾಗಿದೆ. **ಉತ್ತಮವಾದ ಕನ್ನಡಜ್ಞಾನವನ್ನು ಹೊಂದಿದ, ಗಣಕಯಂತ್ರದಲ್ಲಿ, ಲೆಕ್ಕಪತ್ರಗಳಲ್ಲಿ ಅನುಭವ ಹೊಂದಿದ, ಕನ್ನಡ ಭಾಷೆಯನ್ನು ಸ್ಪಷ್ಟವಾಗಿ ತಪ್ಪಿಲ್ಲದೆ ಮಾತನಾಡಲು, ಓದಲು ಹಾಗೂ ಬರೆಯಲು ಬರುವವರಿಗೆ** ಆದ್ಯತೆಯನ್ನು ನೀಡಲಾಗಿದ್ದು, ಬೆಂಗಳೂರಿನಲ್ಲಿ ವಾಸವಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಕಚೇರಿಗೆ ಸಮೀಪದವರಿಗೆ ಹೆಚ್ಚಿನ ಪ್ರಾಧಾನ್ಯತೆ ಕೊಡಲಾಗುವುದು.

೩. **ಇದು ಯಾವುದೇ ಸರ್ಕಾರಿ ನೌಕರಿಯಾಗಿರುವುದಿಲ್ಲ ಹಾಗೂ ಯಾವುದೇ ಹುದ್ದೆಯೂ ಅಲ್ಲ. ಇದು ಗೌರವಯುತವಾದ ಸ್ಥಾನವಾಗಿದ್ದು, ಕನ್ನಡ ನಾಡು-ನುಡಿಗೆ ಸಲ್ಲಿಸುವ ಈ ಕೆಲಸಕ್ಕೆ ಸೂಕ್ತವಾದ ಗೌರವ ಸಂಭಾವನೆಯನ್ನು ಮಾತ್ರ ನೀಡಲಾಗುವುದು.** ಕನ್ನಡದ ಸೇವೆಯನ್ನು ಮಾಡಲು ಇಚ್ಛಿಸಿರುವ ಅಭ್ಯರ್ಥಿಗಳು ಬಂದು ಪರಿಷತ್ತಿನಲ್ಲಿ ಸೇವೆ ಸಲ್ಲಿಸಬಹುದಾಗಿದೆ. ಈ ಸಂಬಂಧ **ಉದ್ಯೋಗ ಮತ್ತು ಕನ್ನಡಪರ ಕೆಲಸಗಳ ವಿವರಗಳೊಂದಿಗೆ ತಮ್ಮ ಸ್ವ-ಪರಿಚಯವನ್ನು ದಿನಾಂಕ ೨೨-೦೪-೨೦೨೩ ರೊಳಗಾಗಿ "ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು, ಚಾಮರಾಜಪೇಟೆ, ಬೆಂಗಳೂರು."** ಇಲ್ಲಿಗೆ ಸ್ವ-ವಿವರವುಳ್ಳ ಅರ್ಜಿಗಳನ್ನು ಕಳಿಸಲು ಕೋರಿದೆ. ಬಂದ ಅರ್ಜಿಗಳನ್ನು ಸಂದರ್ಶನಕ್ಕೆ ಆಹ್ವಾನಿಸಲಾಗುವುದು.

(ಬಿ.ಎಂ. ಪಟೇಲ್‌ಪಾಂಡು)

ಗೌರವ ಕೋಶಾಧ್ಯಕ್ಷರು

Scanned with OKEN Scanner